1102 (1502) ಶ್ರೀ ಅಕ್ಕಿ ಮಲ್ಲಿಕಾರ್ಜುನ ಸಹದೇವಪ್ಪ (ಕುಂದಗೋಳ) ಮಾನ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಅ) ಧಾರವಾಡ ಜಿಲ್ಲೆಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು ;

ಆ) ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ತೆರೆಯಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ;

ಇ) ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಎ.ಎನ್.ಎಂ.ಗಳ ಕೊರತೆ ಇದ್ದದ್ದು ಸರ್ಕಾರದ ಗಮನಕ್ಕೆ ಬಂದಿದೆಯೆ ;

ಈ) ಬಂದಿದ್ದರೆ, ಯಾವಾಗ ಭರ್ತಿ ಮಾಡಲಾಗುವುದು ?

ಶ್ರೀ ಎನ್. ಚಲುವರಾಯಸ್ವಾಮಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಧಾರವಾಡ ಜಿಲ್ಲೆಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ 28.

ಇಲ್ಲ.

ಆ) ಬಂದಿದೆ.

ಇ) ಎ.ಎನ್.ಎಂ. ತರಬೇತಿ ಮುಗಿದ ನಂತರ ಭರ್ತಿ ಮಾಡಲಾಗುವುದು.

1103 (1503) ಶ್ರೀ ಅಕ್ಕಿ ಮಲ್ಲಿಕಾರ್ಜುನ ಸಹದೇವಪ್ಪ (ಕುಂದಗೋಳ) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಅ) ರಾಜ್ಯದಲ್ಲಿ ಗ್ರಾಮ ಪಂಚಾಯತ್‌ಗಳ ಸಂಖ್ಯೆ ಎಷ್ಟು ;

ಆ) ಎಷ್ಟು ಗ್ರಾಮ ಪಂಚಾಯತ್‌ಗಳಿಗೆ ಕಾರ್ಯದರ್ಶಿಗಳು ಇರುವುದಿಲ್ಲ ;

ಇ) ಗ್ರಾಮ ಪಂಚಾಯತ್ ಕಾರ್ಯದರ್ಶಿಗಲ ನೇಮಕಾತಿ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

ಶ್ರೀ ಹೆಚ್.ಸಿ. ಮಹದೇವಪ್ಪ (ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು) :

ಅ) 5651 ಗ್ರಾಮ ಪಂಚಾಯತಿಗಳು.

ಆ) ಕಾರ್ಯದರ್ಶಿ ಇಲ್ಲದ ಯಾವುದೇ ಗ್ರಾಮ ಪಂಚಾಯತಿ ಇರುವುದಿಲ್ಲ.

318 ಗ್ರಾಮ ಪಂಚಾಯತಿ ಕಾರ್ಯದರ್ಶಿ ಹುದ್ದೆಗಳು ಖಾಲಿಯಿದ್ದು, ಖಾಲಿಯಿರುವ ಗ್ರಾಮ ಪಂಚಾಯತಿಗಳಿಗೆ ಪ್ರಭಾರ ವ್ಯವಸ್ಥೆ ಮಾಡಲಾಗಿದೆ.

ಇ) ಎರಡು ಜಿಲ್ಲೆಗಳಿಗೆ ಸಂಬಂಧಿಸಿದಂತೆ, ಬಿಲ್ ಕಲೆಕ್ಟರ್ ವೃಂದದಿಂದ ಗ್ರಾಮ ಪಂಚಾಯತಿ ಕಾರ್ಯದರ್ಶಿ ಹುದ್ದೆಗೆ ಭರ್ತಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿರುತ್ತದೆ.

1104 (762) ಶ್ರೀ ಆಲ್ಕೋಡ್ ಹನುಮಂತಪ್ಪ (ದೇವದುರ್ಗ) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಅ) ರಾಯಚೂರು ಜಿಲ್ಲೆ, ದೇವದುರ್ಗ ತಾಲ್ಲೂಕಿನಲ್ಲಿರುವ ಪದವಿ ಕಾಲೇಜುಗಳು ಎಷ್ಟು ;

ಆ) ಸದರಿ ಕಾಲೇಜುಗಳಲ್ಲಿ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಕೊರತೆಯಿರುವುದು ನಿಜವೇ ;

ಇ) ಹಾಗಿದ್ದಲ್ಲಿ, ಸಿಬ್ಬಂದಿ ಕೊರತೆ ನೀಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;